# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 219 (1667) |
| ಮಾನ್ಯ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.03.2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಮನಗರದ ಅರ್ಚಕರಹಳ್ಳಿಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಸರ್ಕಾರ ಎಷ್ಟು ಎಕರೆ ಜಮೀನು ಮಂಜೂರು ಮಾಡಿದೆ; | ಸರ್ಕಾರದ ಆದೇಶ ಸಂಖ್ಯೆ: ಆಕುಕ 196 ಎಂಪಿಎಸ್ 2006 (ಭಾ), ದಿನಾಂಕ: 18.08.2007ರಂತೆ ರಾಮನಗರ ತಾಲ್ಲೂಕಿನ ಅರ್ಚಕರಹಳ್ಳಿ ಗ್ರಾಮದಲ್ಲಿ ಯೋಜಿಸಲಾಗಿರುವ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಒಟ್ಟು 216 ಎಕರೆ 26 ಗುಂಟೆ ಜಮೀನಿನ ಪೈಕಿ 71 ಎಕರೆ 15 ಗುಂಟೆ ಜಮೀನನ್ನು ರಾಮನಗರದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ನಿರ್ಮಿಸುವ ಸಲುವಾಗಿ ಹಸ್ತಾಂತರಿಸಲು ಆದೇಶಿಸಿದೆ. |
| ಆ) | ವೈದ್ಯಕೀಯ ಶಿಕ್ಷಣ ಇಲಾಖೆಯ ವಿಶ್ವವಿದ್ಯಾಲಯದ ಕ್ಯಾಂಪಸ್ ನಿರ್ಮಾಣ ಕಾಮಗಾರಿಗೆ ಸರ್ಕಾರ ಯಾವಾಗ ಮಂಜೂರಾತಿ ನೀಡಲಾಗಿದೆ; ಕಾಮಗಾರಿ ವಿಳಂಬಕ್ಕೆ ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಆಕುಕ 117 ಎಂಪಿಎಸ್ 2007 (ಭಾಗ-2), ದಿನಾಂಕ: 14.05.2007ರನ್ವಯ ರಾಮನಗರ ತಾಲ್ಲೂಕು ಅರ್ಚಕರಹಳ್ಳಿ ಗ್ರಾಮದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವೈದ್ಯಕೀಯ ವಿಶ್ವವಿದ್ಯಾಲಯ ಕ್ಯಾಂಪಸ್ ಮತ್ತು ಇತರೆ ಪೂರಕ ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ.<br><br>ವಿಶ್ವವಿದ್ಯಾಲಯಕ್ಕೆ ಗುರುತಿಸಲಾಗಿರುವ ಜಮೀನಿನಲ್ಲಿ ಕೆಲ ರೈತರು ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ನ್ಯಾಯಾಲಯವು ಕೆಲ ಜಮೀನಿಗೆ ತಡೆಯಾಜ್ಞೆಯನ್ನು ನೀಡಿರುತ್ತದೆ. |
| ಇ) | ಕಾಮಗಾರಿ ಕೆಲಸಗಳನ್ನು ಯಾವಾಗ ಪ್ರಾರಂಭಿಸಲಾಗುವುದು? (ಮಾಹಿತಿ ನೀಡುವುದು) | ವಿವಾದ ರಹಿತ ಜಮೀನಿನಲ್ಲಿ ಸರ್ವೆ ಕಾರ್ಯವನ್ನು ಪ್ರಾರಂಭಿಸಲಾಗಿದ್ದು, ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು KSHRDPಗೆ ವಹಿಸಲಾಗಿದೆ. ವಿಸ್ತೃತ ಯೋಜನಾ ವರದಿಯು ಸ್ವೀಕೃತವಾದ ನಂತರ ನಿಯಮಾನುಸಾರ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ವಹಿಸಲಾಗುವುದು.<br><br>ವಿವಾದಿತ ಜಮೀನಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮಕ್ಕೆಗೊಳ್ಳಲಾಗುತ್ತಿದೆ. |

ಸಂಖ್ಯೆ: ಎಂಇಡಿ 26 ಆರ್‌ಜಿಯು 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು